ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 14.10.2022

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ **15-10-2022** ರಿಂದ **19-10-2022** ವರೆಗೆ)

| ನಿಯತಾಂಕಗಳು | 15.10.2022 | 16.10.2022 | 17.10.2022 | 18.10.2022 | 19.10.2022 |
|---|---|---|---|---|---|
| ಮಳೆ (ಮಿ ಮಿ) | 44 | 25 | 25 | 16 | 13 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 28 | 28 | 27 | 27 | 27 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 20 | 20 |
| ಮೋಡ (ಪ್ರಮಾಣ) | 7 | 7 | 7 | 7 | 7 |
| ಅರ್ದ್ರತೆ 7.20 ಬೆ (ಶೇ) | 96 | 96 | 96 | 98 | 98 |
| ಅರ್ದ್ರತೆ 2.20 ಮ (ಶೇ) | 90 | 90 | 90 | 92 | 92 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 2 | 3 | 3 | 2 | 3 |
| ಗಾಳಿಯ ದಿಕ್ಕು ( ಡಿಗ್ರಿ) | 135 | 101 | 117 | 115 | 288 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಸಾದಾರಣದಿಂದ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **27.0-28.0°C** ಮತ್ತು ಕನಿಷ್ಠ **20.0°C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **96-98 %** ಇದ್ದು ಮಧ್ಯಾಹ್ನ **90-92 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **2-3** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**“ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ!”**

- ಚಿತ್ತ ನಕ್ಷತ್ರದ ಮಳೆಯ ಕಾಲವು ಅಕ್ಟೋಬರ್ ತಿಂಗಳ 11 ರಿಂದ ಅಕ್ಟೋಬರ್ 23 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 55.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. ರಾಗಿ ಬೆಳೆಗಳಲ್ಲಿ ಕಳೆಗಳ ಸಮಸ್ಯೆ ಹೆಚ್ಚಾಗಿರುತ್ತದೆ ಇದರ ನಿರ್ಮೂಲನೆಗೆ ಅಂತರ ಬೇಸಾಯ ಮಾಡಿ ಕಳೆ ನಿರ್ಮೂಲನೆ ಮಾಡಿ .<br>2. ತೊಗರಿ ಬೆಳೆಯಲ್ಲಿ ಅಂತರ ಬೇಸಾಯ ಮಾಡಿ. |
| ಮುಂಗಾರು ಬೆಳೆಗಳು | ಬೆಳವಣಿಗೆ ಹಂತ/ ಹೂವಿನ ಹಂತ/ ಮಾಗುವ ಹಂತ | **ಈ ಕೆಳಗಿನ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ರಾಗಿ: ಕೆ.ಎಮ್,ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು. |
| ಮಾವು | | 1. ಮಾವಿನ ತೋಪುಗಳಲ್ಲಿ ಒಣ ರೆಂಬೆ ಕೊಂಬೆಗಳನ್ನು ಕತ್ತರಿಸಿ ಹೊರಹಾಕಿ.<br>2. ಕಳೆ ನಿರ್ವಹಣೆಗೆ ಮತ್ತು ಭೂಮಿಯಲ್ಲಿನ ತೇವಾಂಶವನ್ನು ಸಂರಕ್ಷಿಸಲು ಅಂತರ ಬೇಸಾಯ ಮಾಡಬೇಕು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |
| | | **ಹೈನುಗಾರಿಕೆ** |
| | | |
| **ಪಶುಸಂಗೋಪನೆ** | | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ. |

| | |
|---|---|
| | ➢ ಉತ್ತಮ ಮಳೆ ಮತ್ತು ತೇವಾಂಶದ ಆಧಾರದಲ್ಲಿ ಯತೇಚ್ಛ ಹುಲ್ಲು ಮತ್ತು ಮೇವು ಲಭ್ಯವಿರುವುದರಿಂದ ಹೈನುಗಾರಿಕೆ ಬಲವರ್ಧನೆಗೆ ತುಂಬಾ ಸಹಕಾರಿಯಾಗುತ್ತದೆ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |

**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.